**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹೊನ್ನಾವರ. ಸಿ.ಸಿ ನಂ.86/2024.**

ಪಿರ್ಯಾದುದಾರರುಃ- ಆಸಿಫ್ ಶರೀಫ್ ಹಸನ್ ಸಾಬ,
ವಯಸ್ಸು ಸುಮಾರುಃ- 42 ವರ್ಷ,
ಸಾಕೀನಃ- ಟೊಂಕಾ, ಕಾಸರಕೋಡ,
ತಾಲೂಕುಃ- ಹೊನ್ನಾವರ (ಉ.ಕ).

**-ವಿರುದ್ಧ-**

ಆರೋಪಿಯ ಹೆಸರುಃ- ಇಸ್ಮಾಯಿಲ್ ಇಬ್ರಾಹಿಂ ಸಾಬ್,
ವೃತ್ತಿಃ ಪ್ರೊಪ್ರೈಟರ್: Al Farhan Sea Foods,
ಸಾಕೀನಃ- ಪಳ್ಳಿಕೇರಿ, ಅಂಚೆಃ ಹಳದೀಪುರ,
ತಾಲೂಕುಃ- ಹೊನ್ನಾವರ (ಉ.ಕ).

**ದಂಡ ಪ್ರಕ್ರಿಯಾ ಸಂಹಿತೆ ಕಲಂ. 313 ರನ್ವಯ ಆರೋಪಿಯ ಹೇಳಿಕೆ.**

ಪ್ರಶ್ನೆಃ 1. ನೀವು ಪಿರ್ಯಾದುದಾರರ ಪರವಾಗಿ ಫ್ರಾಸಾ-1 ರವರ ಹೇಳಿಕೆಯನ್ನು ಕೇಳಿದ್ದೀರಾ?

ಆರೋಪಿಯ ಉತ್ತರಃ- ಕೇಳಿದ್ದೇನೆ

ಪ್ರಶ್ನೆಃ 2. ಫ್ರಾಸಾ-1 ರವರು ತಮ್ಮ ಸಾಕ್ಷ್ಯದಲ್ಲಿ, ಆರೋಪಿಯಾದ ನೀವು, ಪಿರ್ಯಾದಿಯವರಿಂದ ಕೈಗಡವಾಗಿ ರೂ. 1,65,000/- ಗಳನ್ನು ಸಾಲವಾಗಿ ಪಡೆದುಕೊಂಡಿದ್ದು, ಸದರಿ ಸಾಲದ ಮರುಪಾವತಿಗಾಗಿ ನೀವು ಪಿರ್ಯಾದಿ ಹೆಸರಿಗೆ ನಿಮ್ಮ ಬ್ಯಾಂಕ್ ಖಾತೆಯುಳ್ಳ **ಬ್ಯಾಂಕ್ ಆಫ್ ಬರೋಡಾ, ಕುಮಟಾ** ಶಾಖೆಯ ನಿಪಿ-1ರ ಚೆಕ್ ನಂ.000020 ನ್ನು ದಿನಾಂಕ 29-12-2023 ರಂದು ರೂ.1,65,000/- ಎಂದು ನಮೂದಿಸಿ ಚೆಕ್ ಗೆ ಸಹಿ ಮಾಡಿಕೊಟ್ಟು, ಸದರಿ ಚೆಕ್ ನ್ನು ಬ್ಯಾಂಕ್ ಗೆ ಹಾಜರುಪಡಿಸಿದ ಕೂಡಲೇ ಹಣ ಸಿಗುತ್ತದೆ ಎಂದು ಭರವಸೆ ನೀಡಿರುತ್ತೀರೆಂದು ಸಾಕ್ಷಿ ನುಡಿದಿರುತ್ತಾರೆ ಇದಕ್ಕೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ- ಸುಳ್ಳು

ಪ್ರಶ್ನೆಃ 3. ಫ್ರಾಸಾ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಪಿರ್ಯಾದಿಯವರು ಹಣ ಪಡೆಯುವ ಸಲುವಾಗಿ ಸದರಿ ಚೆಕನ್ನು ಅವರ ಖಾತೆಯಿರುವ **ಕೆನರಾ ಬ್ಯಾಂಕ್., ಹೊನ್ನಾವರ** ಶಾಖೆಯಲ್ಲಿ ಹಾಜರುಪಡಿಸಿದಾಗ, ಸದರಿ ಬ್ಯಾಂಕ್ ನವರು, Refer to drawer ಎಂದು ತಿಳಿಸಿ ಸದರಿ ಚೆಕನ್ನು ದಿನಾಂಕ

30-12-2023 ರಂದು ನಿಪಿ-2ರ ಮೆಮೋದೊಂದಿಗೆ ವಾಪಾಸ್ ನೀಡಿರುತ್ತಾರೆ ಎಂದು ಸಾಕ್ಷಿ ನುಡಿದಿರುತ್ತಾರೆ ಇದಕ್ಕೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ- ಸುಳ್ಳು

ಪ್ರಶ್ನೆಃ 4. ಪ್ರಾಸಾ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಪಿರ್ಯಾದಿಯವರು ನಿಮಗೆ ವಕೀಲರ ಮೂಲಕ ದಿನಾಂಕ 05-01-2024 ರಂದು ನಿಪಿ-3ರಂತೆ ರಿಜಿಸ್ಟರ್ ನೋಟಿಸ್ ಕಳುಹಿಸಿದ್ದು, ಸದರಿ ನೋಟಿಸ್ ನಿಮಗೆ ದಿನಾಂಕ 06-01-2024 ರಂದು ಜಾರಿಯಾಗಿದ್ದರೂ ಸಹ ನೀವು ಚೆಕ್ ನಲ್ಲಿ ನಮೂದಿಸಿದ ಹಣವನ್ನು ನೀಡಿರುವುದಿಲ್ಲ ಎಂದು ಸಾಕ್ಷ್ಯ ನುಡಿದಿರುತ್ತಾರೆ ಇದಕ್ಕೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ- ಸುಳ್ಳು

ಪ್ರಶ್ನೆ 5: ನಿಮ್ಮ ಪರವಾಗಿ ಏನಾದರೂ ಸಾಕ್ಷಿ ಇದೆಯೇ?

ಆರೋಪಿಯ ಉತ್ತರಃ- ಇದೆ

ಪ್ರಶ್ನೆ 6: ಸದ್ರಿ ಪ್ರಕರಣ ಕುರಿತು ನೀವು ಏನಾದರೂ ಹೇಳುವುದು ಇದೆಯೇ?

ಆರೋಪಿಯ ಉತ್ತರಃ- ಆರೋಪ ಸುಳ್ಳು

(ಈ ಮೂಲಕ ಪ್ರಮಾಣಿಸುವುದೇನೆಂದರೆ ಆರೋಪಿಯು ಕೊಟ್ಟಂತ ಹೇಳಿಕೆಯ ಉತ್ತರವನ್ನು ಪಡೆಯಲಾಗಿದೆ )

ಸಹಿ ಇದೆ/-

**ದಿನಾಂಕಃ- 05-01-2026.**

**(ಅನಿಲ್ ಜೋನ್ ಸಿಕ್ವೇರಾ).,**
**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಮ್.ಎಫ್.ಸಿ.,ಹೊನ್ನಾವರ.**

ಆರೋಪಿಯ ಸಹಿಃ- ಸಹಿ ಇದೆ.

****